ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/102/ಜಿ.ಇ.ಆರ್-ಹೆಚ್ಚಳ/2017-18

ದಿನಾಂಕ:28.07.2017

# ಸುತ್ತೋಲೆ

ವಿಷಯ: ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಾಮಾನ್ಯ ಪ್ರವೇಶಾತಿ ಅನುಪಾತ (ಜಿ.ಇ.ಆರ್) ಅನ್ನು ವರ್ಧಿಸುವ ಮತ್ತು ಗ್ರಾಮೀಣ ಭಾಗದ ಜನತೆಯ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಬೆಂಗಳೂರು ಇವರ ಇ-ಮೇಲ್ ಸಂದೇಶ ದಿನಾಂಕ:22.07.2017.

* * * * *

ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಾಮಾನ್ಯ ಪ್ರವೇಶಾತಿ ಅನುಪಾತ (ಜಿ.ಇ.ಆರ್) ಅನ್ನು ವರ್ಧಿಸುವ ಮತ್ತು ಗ್ರಾಮೀಣ ಭಾಗದ ಜನತೆಯ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಸರ್ಕಾರ ಹಲವು ಸುಧಾರಣಾ ಕ್ರಮಗಳನ್ನು ಕೈಗೊಂಡಿದೆ. ಈ ದಿಸೆಯಲ್ಲಿ ಇನ್ನೂರು ಅಥವಾ ಅದಕ್ಕಿಂತ ಹೆಚ್ಚು ಜನಸಂಖ್ಯೆ ಇದ್ದು, ಒಬ್ಬರೂ ಪದವೀಧರರಿಲ್ಲದಿರುವ ಹಳ್ಳಿಗಳನ್ನು ಗುರುತಿಸಲಾಗಿದ್ದು, ಇಲ್ಲಿನ ಜನತೆಯಲ್ಲಿ ಒಬ್ಬರಾದರೂ ಪದವೀಧರರಾಗುವಂತೆ ಉನ್ನತ ಶಿಕ್ಷಣ ವಲಯದಲ್ಲಿ ಭಾಗವಹಿಸುವುದನ್ನು ಪ್ರೋತ್ಸಾಹಿಸಲು ಉದ್ದೇಶಿಸಲಾಗಿದೆ. ಇದಕ್ಕೆ ಪೂರ್ವಭಾವಿಯಾಗಿ ಈ ಹಳ್ಳಿಗಳಲ್ಲಿ ಜನ ಉನ್ನತ ಶಿಕ್ಷಣ ಪಡೆಯಲು ಮುಂದಾಗದಿರಲು ಮತ್ತು ಉನ್ನತ ಶಿಕ್ಷಣದಲ್ಲಿ ಪ್ರವೇಶಾತಿ ಪಡೆದೂ ಅದನ್ನು ಅರ್ಧಕ್ಕೇ ಮೊಟಕಗೊಳಸಲು ಇರಬಹುದಾದ ಕಾರಣಗಳನ್ನು ಸ್ಪಷ್ಟವಾಗಿ ಗುರುತಿಸಿ, ಇಂಥ ಪ್ರಕರಣಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ಇರಬಹುದಾದ ಅಡೆತಡೆಗಳನ್ನು ವಸ್ತುನಿಷ್ಠವಾಗಿ ಪರಿಹರಿಸುವ ಕಾರ್ಯ ಈ ಗ್ರಾಮಗಳ ಜನರ ನೇರಸಂಪರ್ಕವನ್ನು ಸಾಧಿಸುವುದರೊಂದಿಗೆ ಅತ್ಯಗತ್ಯವಾಗಿ ಜರುಗಬೇಕಾಗಿದೆ.

ಉನ್ನತ ಶಿಕ್ಷಣ ವಲಯದಲ್ಲಿ ಸೇವಾನಿರತರಾಗಿರುವ ಅಧ್ಯಾಪಕರು ಮೇಲೆ ವಿವರಿಸಿದ ಧ್ಯೇಯೋದ್ದೇಶಗಳನ್ನು ಸಾಧಿಸುವಲ್ಲಿ ಸಕ್ರಿಯ ಪಾತ್ರ ವಹಿಸುವುದು ಅತ್ಯಂತ ಮಹತ್ವಪೂರ್ಣವಾಗಿರುತ್ತದೆ. ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಪಟ್ಟಿಯಲ್ಲಿ ಇನ್ನೂರಕ್ಕೂ ಹೆಚ್ಚು ಜನಸಂಖ್ಯೆಯುಳ್ಳ ಮತ್ತು ಒಬ್ಬ ಪದವೀಧರರೂ ಇಲ್ಲದ ಹಳ್ಳಿಗಳ ಹೆಸರನ್ನು ನಮೂದಿಸಲಾಗಿದೆ. ಈ ಹಳ್ಳಿಗಳಲ್ಲಿ ಕನಿಷ್ಠ ಒಬ್ಬರನ್ನಾದರೂ ಪದವೀಧರರನ್ನಾಗಿ ಮಾಡುವುದು ಸರ್ಕಾರದ ಉದ್ದೇಶವಾಗಿರುತ್ತದೆ.

ಸರ್ಕಾರದ ಈ ಉದ್ದೇಶವನ್ನು ಕಾರ್ಯಗತಗೊಳಸುವುದಕ್ಕಾಗಿ ಮೂವತ್ತು ಜಿಲ್ಲೆಗಳ ಲೀಡ್ ಕಾಲೇಜುಗಳ ಪ್ರಾಂಶುಪಾಲರು ಮುಖ್ಯ ನೋಡಲ್ ಅಧಿಕಾರಿಗಳಾಗಿ ಕಾರ್ಯ ನಿರ್ವಹಿಸಿ, ತಮ್ಮ ಜಿಲ್ಲೆಯ ಪ್ರತಿ ತಾಲ್ಲೂಕಿಗೂ ಒಬ್ಬ ಪ್ರಾಂಶುಪಾಲರನ್ನು ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳನ್ನಾಗಿ ಹಾಗೂ ಈ ತಾಲ್ಲೂಕುಗಳಲ್ಲಿರುವ ಪದವೀಧರ ಶೂನ್ಯವಾದ ಮತ್ತು ಪಟ್ಟಿಯಲ್ಲಿ ನಮೂದಿಸಲ್ಪಟ್ಟಿರುವ ಹಳ್ಳಿಗಳಿಗೆ ಭೇಟಿ ನೀಡಲು ಪ್ರತಿ ಹಳ್ಳಿಗೆ ಒಬ್ಬರಂತೆ ಉಪನ್ಯಾಸಕರನ್ನು ನೇಮಿಸಲು ತಿಳಿಸಲಾಗಿದೆ.

.......2

ಹೀಗೆ ನೇಮಿಸಲ್ಪಟ್ಟ ಉಪನ್ಯಾಸಕರು ತಮಗೆ ನಿಗದಿಯಾದ ಹಳ್ಳಿಗಳಿಗೆ ಭೇಟಿ ನೀಡಿ, ಉನ್ನತ ಶಿಕ್ಷಣಕ್ಕೆ ಸಂಬಂಧಪಟ್ಟಂತೆ ಅಲ್ಲಿನ ಸ್ಥಿತಿಗಳನ್ನು ಪರಿಶೀಲಿಸಿ, ಪಿ.ಯು.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿಯೂ ಪದವಿ ಶಿಕ್ಷಣ ಪಡೆಯಲು ಮುಂದೆ ಬಾರದ ಮತ್ತು ಪದವಿ ಶಿಕ್ಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿರುವ ವ್ಯಕ್ತಿಗಳನ್ನು ಪದವಿ ಶಿಕ್ಷಣದಲ್ಲಿ ತೊಡಗಿಕೊಳ್ಳುವಂತೆ ಪ್ರೋತ್ಸಾಹಿಸಿ, ಅವರಿಗಿರಬಹುದಾದ ಅಡಚಣೆಗಳನ್ನು ನಿವಾರಿಸಿಕೊಳ್ಳಲು ಸೂಕ್ತ ಮಾರ್ಗದರ್ಶನ ನೀಡಬೇಕಾಗಿರುತ್ತದೆ. ಸದರಿ ಉಪನ್ಯಾಸಕರು ಅಧಿಕೃತ ಭತ್ಯೆಗಳನ್ನು ಪಡೆಯಲು ಅರ್ಹರಿರುತ್ತಾರೆ. ಈ ಉಪನ್ಯಾಸಕರು ತಮ್ಮ ಕಾರ್ಯದ ವರದಿಯನ್ನು ಲಿಖಿತರೂಪದಲ್ಲಿ ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳಿಗೆ ಸಲ್ಲಿಸುವುದು. ಈ ವರದಿಗಳ ಕ್ರೋಢೀಕೃತ ಪ್ರತಿಯನ್ನು ತಾಲ್ಲೂಕು ಮಟ್ಟದ ನೋಡಲ್ ಅಧಿಕಾರಿಗಳು ಮುಖ್ಯ ನೋಡಲ್ ಅಧಿಕಾರಿಗಳಿಗೆ ಸಲ್ಲಿಸಿ, ಅವರ ಸಹಕಾರ ಮತ್ತು ಮಾರ್ಗದರ್ಶನವನ್ನು ಪಡೆಯುವುದು. ಮುಖ್ಯ ನೋಡಲ್ ಅಧಿಕಾರಿಗಳು ಇಲಾಖೆಯೊಂದಿಗೆ ಸಂಪರ್ಕದಲ್ಲಿದ್ದು ಕಾರ್ಯವನ್ನು ಯಶಸ್ವಿಗೊಳಿಸುವುದು.

ಸೂಚಿತ ಕಾರ್ಯವನ್ನು ಅತಿ ಶೀಘ್ರದಲ್ಲಿ ಕೈಗೊಳ್ಳಬೇಕಾಗಿದ್ದು, ಈ ಸಂಬಂಧ ಮಾಹಿತಿ ಸಂವಹನ ಮತ್ತು ಚರ್ಚೆಗಾಗಿ **ದಿನಾಂಕ: 29-07-2017ರಂದು ಮಧ್ಯಾಹ್ನ 02:00 ಗಂಟೆಯಿಂದ 4:00 ಗಂಟೆಯವರೆಗೆ ವಿಡಿಯೋ ಕಾನ್ಫರೆನ್ಸ್** ಏರ್ಪಡಿಸಲಾಗಿದ್ದು, ಸದರಿ ಕಾರ್ಯಕ್ರಮದಲ್ಲಿ ಎಲ್ಲ ಪ್ರಾಂಶುಪಾಲರೂ ಕಡ್ಡಾಯವಾಗಿ ಭಾಗವಹಿಸಬೇಕೆಂದು ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

**<u>ಇವರಿಗೆ,</u>**

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.

**<u>ಪ್ರತಿಯನ್ನು ಮಾಹಿತಿಗಾಗಿ:</u>**

1) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರು ರವರ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಅಧಿಕಾರಿಗಳ ಅವಗಾಹನೆಗಾಗಿ
2) ಕಛೇರಿ ಪ್ರತಿ